# ಚಾರ್ಟರ್ಡ್ ಸಹಕಾರಿ ಬ್ಯಾಂಕ್ ನಿಯಮಿತ

## CHARTERED SAHAKARI BANK NIYAMITHA

ನಂ.1, 1ನೇ ಮುಖ್ಯ ರಸ್ತೆ , 1ನೇ ಬ್ಲಾಕ್, ಕೋರಮಂಗಲ, ಬೆಂಗಳೂರು - 560 034
ದೂರವಾಣಿ : 080-25526288 website : www.csbank.in

## ನೇಮಕಾತಿ ಪ್ರಕಟಣೆ

**"ಈ ಕೆಳಕಂಡ ಹುದ್ದೆಗಳ ಭರ್ತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ"**

**1. ಹುದ್ದೆಗಳ ಸಂಖ್ಯೆ**

1) ಕಿರಿಯ ಸಹಾಯಕರು - 7 (ಏಳು)
2) ಚಾಲಕ ಕಂ ಅಟೆಂಡರ್ - 2 (ಎರಡು)

**2. ವಿದ್ಯಾರ್ಹತೆ**

1) **ಕಿರಿಯ ಸಹಾಯಕರ ಹುದ್ದೆಗೆ** - ಭಾರತದ ಕಾನೂನಿನ ಅಡಿಯಲ್ಲಿ ಸ್ಥಾಪನೆಯಾದ ವಿಶ್ವ ವಿದ್ಯಾನಿಲಯದ ಯಾವುದೇ ಪದವಿಯಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿರಬೇಕು (ಪದವಿಯ ಎಲ್ಲಾ ವರ್ಷದ ಸರಾಸರಿ ಶೇಕಡ 60 ಮತ್ತು ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರಬೇಕು)

ಅ) ಬಿ.ಕಾಂ., /ಎಂ.ಕಾಂ., / ಎಂ.ಬಿ.ಎ (Finance) ನಲ್ಲಿ ತೇರ್ಗಡೆಯಾದವರಿಗೆ ಆದ್ಯತೆ.

ಆ) ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲಿಕೇಷನ್‌ನಲ್ಲಿ ಜ್ಞಾನ ಹೊಂದಿರಬೇಕು.

ಇ) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡಬೇಕು ಮತ್ತು ಅರ್ಥ ಮಾಡಿಕೊಳ್ಳಬೇಕು

2) **ಚಾಲಕ ಕಂ ಅಟೆಂಡರ್ ಹುದ್ದೆಗೆ** - ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು ಕನ್ನಡವನ್ನು ಒಂದು ಭಾಷೆಯಾಗಿ ಓದಿರಬೇಕು.

ಅ) ಕಾನೂನು ಬದ್ಧ ಲಘು ಮೋಟಾರು ವಾಹನದ ಡ್ರೈವಿಂಗ್ ಲೈಸೆನ್ಸ್ ಹೊಂದಿರಬೇಕು.

**3. ವೇತನ ಶ್ರೇಣಿ**

1) <u>ಕಿರಿಯ ಸಹಾಯಕರ ಹುದ್ದೆ</u> : 37500-900-39300-1000-43300-1125- 47800 -1250-52800 -1375-58300-1500-64300-1650-74200-1900-76100.

2) <u>ಚಾಲಕ ಕಂ ಅಟೆಂಡರ್ ಹುದ್ದೆ</u> : 29600-725-32500-800-35700-900- 39300- 1000-43300 -1125 -47800-1250-52800

ಹಾಗೂ ಮೂಲ ವೇತನದ ಜೊತೆಗೆ ಆಡಳಿತ ಮಂಡಳಿಯು ನಿಗದಿಪಡಿಸುವ ರೀತಿಯಲ್ಲಿ ತುಟ್ಟಿ ಭತ್ಯೆ, ಮನೆ ಬಾಡಿಗೆ ಭತ್ಯೆ , ನಗರ ಪರಿಹಾರ ಭತ್ಯೆ ಮತ್ತು ಇತರ ಭತ್ಯೆಗಳನ್ನು ನೀಡಲಾಗುವುದು.

**4. ವಯೋಮಿತಿ**

ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ - ಕನಿಷ್ಟ 18 ವರ್ಷಗಳಾಗಿರಬೇಕು. ಗರಿಷ್ಟ

A) ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ / ಪ್ರವರ್ಗ - 1 ರವರಿಗೆ - 40 ವರ್ಷಗಳು

B) ಹಿಂದುಳಿದ ಜಾತಿ ಮತ್ತು ಹಿಂದುಳಿದ ವರ್ಗದವರಿಗೆ - 38 ವರ್ಷಗಳು

C) ಇತರೆ ಅಭ್ಯರ್ಥಿಗಳಿಗೆ - 35 ವರ್ಷಗಳು (A ಮತ್ತು B ಗುಂಪಿನ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ ಲಗತ್ತಿಸತಕ್ಕದ್ದು)

**5. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ**

| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕ | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ | ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ |
|---|---|---|
| 28-01-2026 | 18-02-2026 | 18-02-2026 |

**6. ಅರ್ಜಿ ಶುಲ್ಕ**

ನಿಗದಿಪಡಿಸಿದ ಅರ್ಜಿ / ಪರೀಕ್ಷಾ ಶುಲ್ಕ : ಜಿಎಸ್‌ಟಿ ಒಳಗೊಂಡಂತೆ

| | |
|---|---|
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ -1 | ರೂ.1200 |
| ಹಾಗೂ ಇತರರಿಗೆ | ರೂ. 2000 |

ಅರ್ಜಿ ಶುಲ್ಕವನ್ನು **"Chartered Sahakari Bank Niyamitha"** ಹೆಸರಿಗೆ ಡಿಮ್ಯಾಂಡ್ ಡ್ರಾಫ್ಟ್ ಮೂಲಕ ಅರ್ಜಿಯ ಜೊತೆಯಲ್ಲಿ ಸಲ್ಲಿಸತಕ್ಕದ್ದು. ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.

7. **ಅರ್ಜಿಸಲ್ಲಿಕೆಯ ವಿಧಾನ** : ಅರ್ಹ ಅಭ್ಯರ್ಥಿಗಳು ಬ್ಯಾಂಕಿನ ವೆಬ್‌ಸೈಟ್ www.csbank.in ಅಥವಾ charteredsahakari.bank.in ನಿಂದ ಡೌನ್‌ಲೋಡ್ ಮಾಡಿದ ಅರ್ಜಿಯನ್ನು ಭರ್ತಿ ಮಾಡಿ, ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಗೆ ಅಂಟಿಸತಕ್ಕದ್ದು. ಸಂಬಂಧಿಸಿದ ಎಲ್ಲಾ ವರ್ಷಗಳ ಪದವಿ ಅಂಕ ಪಟ್ಟಿ, ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ ಪ್ರಮಾಣ ಪತ್ರ, ಜನ್ಮ ದಿನಾಂಕ ದೃಢೀಕರಣಗಳ ನಕಲು ಮತ್ತು ಅನುಭವ ಪತ್ರಗಳನ್ನು ಸ್ವದೃಢೀಕರಿಸಿ, ಎರಡು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿ ಜೊತೆ ಲಗತ್ತಿಸುವುದು. ಅರ್ಜಿಯನ್ನು ಅರ್ಜಿ ಶುಲ್ಕದ ಡಿ.ಡಿ.ಯೊಂದಿಗೆ ಲಗತ್ತಿಸಿ ಲಕೋಟೆ ಮೇಲೆ ——— ಹುದ್ದೆಗಾಗಿ ಅರ್ಜಿ ಎಂದು ನಮೂದಿಸಿ ದಿನಾಂಕ 18-02-2026ರಂದು ಸಂಜೆ 5.30 ಗಂಟೆಯೊಳಗೆ ಅಥವಾ ಅದಕ್ಕೂ ಮೊದಲು **ಚಾರ್ಟರ್ಡ್ ಸಹಕಾರಿ ಬ್ಯಾಂಕ್ ನಿಯಮಿತ, ನಂ. 1, 1ನೇ ಮುಖ್ಯ ರಸ್ತೆ, 1ನೇ ಬ್ಲಾಕ್, ಕೋರಮಂಗಲ, ಬೆಂಗಳೂರು -560034** ಈ ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆಯ ಮೂಲಕ ತಲುಪಿಸಬೇಕು. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

| | |
|---|---|
| 8. ಲಿಖಿತ ಪರೀಕ್ಷೆ ಮತ್ತು ಕರೆ ಪತ್ರಗಳು | **ಕಿರಿಯ ಸಹಾಯಕರ ಹುದ್ದೆಯ** ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಗೆ ಹಾಜರಾಗಲು ಬ್ಯಾಂಕು ತೀರ್ಮಾನಿಸಿದ ಮಾನದಂಡದ ಅನುಗುಣವಾಗಿ ಅರ್ಹ ಅಭ್ಯರ್ಥಿಗಳಿಗೆ ಕರೆ ಪತ್ರಗಳನ್ನು ಕಳುಹಿಸಲಾಗುವುದು. ಕಿರಿಯ ಸಹಾಯಕರ ಹುದ್ದೆಗೆ 200 ಅಂಕಗಳ ಲಿಖಿತ ಪರೀಕ್ಷೆ ಇದ್ದು , ಈ ಪೈಕಿ ಕನ್ನಡ ಭಾಷೆಗಾಗಿ 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ 25 ಅಂಕಗಳು, ಸಹಕಾರಿ ವಿಷಯಗಳಿಗಾಗಿ 50 ಅಂಕಗಳು, ಭಾರತ ಸಂವಿಧಾನಕ್ಕಾಗಿ 25 ಅಂಕಗಳು, ಬ್ಯಾಂಕಿನ ಉದ್ದೇಶಗಳು ಮತು ಕಾರ್ಯ ಚಟುವಟಿಕೆ ವಿಷಯಗಳಿಗೆ 25 ಅಂಕಗಳು ಒಳಗೊಂಡಿರುತ್ತದೆ. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಪಡೆಯುವ ಅಂಕಗಳನ್ನು ಶೇಕಡ 85ಕ್ಕೆ ನಿಗದಿಪಡಿಸಿ, ಉಳಿದ ಪ್ರತಿಶತ 15 ಅಂಕಗಳನ್ನು ಸಂದರ್ಶನಕ್ಕೆ ನೀಡಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳ ಆಧಾರದ ಮೇಲೆ 1:5 ರ ಅನುಪಾತದಲ್ಲಿ ಮೌಖಿಕ ಸಂದರ್ಶನ ನಡೆಸಿ ಆಯ್ಕೆ ಮಾಡಲಾಗುವುದು.<br><br>**ಚಾಲಕ ಕಂ ಅಟೆಂಡರ್** ಹುದ್ದೆಯ ಅಭ್ಯರ್ಥಿಗಳು ಕನ್ನಡ ಭಾಷೆ ಓದುವುದಕ್ಕೆ , ಬರೆಯುವುದಕ್ಕೆ ಹಾಗೂ ಸಾಮಾನ್ಯ ಜ್ಞಾನ ಇತ್ಯಾದಿಗಳಿಗೆ ಸಂಬಂಧಿಸಿದಂತೆ ಪರೀಕ್ಷೆ ಬರೆಯಬೇಕಾಗಿರುತ್ತದೆ. ಹಾಗೂ ವಾಹನ ಚಾಲನಾ ಸಾಮರ್ಥ್ಯದ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಪರೀಕ್ಷೆಯಲ್ಲಿನ ಅವರ ಸಾಧನೆಯ ಮೇರೆಗೆ ಬ್ಯಾಂಕಿನ ಮಾನದಂಡದಂತೆ ಸಂದರ್ಶನ ಪತ್ರ ಕಳುಹಿಸಲಾಗುವುದು. ಪರೀಕ್ಷೆಯಲ್ಲಿ ಮತ್ತು ಸಂದರ್ಶನದಲ್ಲಿ ಅಭ್ಯರ್ಥಿಗಳ ಸಾಧನೆ ಆಧರಿಸಿ ಆಯ್ಕೆ ಮಾಡಲಾಗುವುದು. |

**<u>ಸಾಮಾನ್ಯ ಸೂಚನೆಗಳು</u>**

ಎ. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ ಸಲ್ಲಿಸತಕ್ಕದ್ದು

ಬಿ. ಅಂಚೆ ಇಲಾಖೆಯಿಂದ ಅಥವಾ ಇನ್ನಾವುದೇ ಕಾರಣದಿಂದ ಪತ್ರಗಳು / ಅರ್ಜಿಗಳು ತಲುಪಲು ತಡವಾದರೆ ಅಥವಾ ತಲುಪದಿದ್ದರೆ ಬ್ಯಾಂಕು ಜವಾಬ್ದಾರಿಯಾಗಿರುವುದಿಲ್ಲ

ಸಿ. ಸರ್ಕಾರಿ ಸಂಸ್ಥೆ ಅಥವಾ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳಲ್ಲಿ ಅಥವಾ ಇನ್ನಾವುದೇ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಅಭ್ಯರ್ಥಿಗಳು ಸಂದರ್ಶನ ಸಂದರ್ಭದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಂಸ್ಥೆಯಿಂದ ನಿರಪೇಕ್ಷಣಾ ಪತ್ರವನ್ನು ಸಲ್ಲಿಸಬೇಕು. ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳು ಅರ್ಜಿಯ ಜೊತೆ ಲಗತ್ತಿಸಿದ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

ಡಿ.. ಲಿಖಿತ ಪರೀಕ್ಷೆಯನ್ನು ಬೆಂಗಳೂರಿನಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳು ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕಾಗುತ್ತದೆ.

ಇ ಅಭ್ಯರ್ಥಿಗಳ ಅರ್ಹತೆ, ಲಿಖಿತ ಪರೀಕ್ಷೆ , ಸಂದರ್ಶನ ಅಥವಾ ಅಭ್ಯರ್ಥಿಗಳ ಆಯ್ಕೆಯ ವಿಚಾರದಲ್ಲಿ ಸಿಬ್ಬಂದಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮ. ಈ ಕುರಿತು ಪತ್ರ ವ್ಯವಹಾರವನ್ನು ಮಾನ್ಯ ಮಾಡುವುದಿಲ್ಲ, ಪರಿಗಣಿಸಲಾಗದ ಅರ್ಜಿಗಳ ಬಗ್ಗೆ ಯಾವ ಮಾಹಿತಿಗಳನ್ನು ನೀಡಲಾಗುವುದಿಲ್ಲ

ಎಫ್. ಯಾವುದೇ ಕಾರಣಕ್ಕೂ ಒಮ್ಮೆ ಪಾವತಿಯಾದ ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ

ಜಿ. ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ. ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಹಂತದಲ್ಲಿ ಯಾವುದೇ ಕಾರಣ ನೀಡದೆ ಹಿಂದಕ್ಕೆ ಪಡೆಯುವ / ರದ್ದು ಪಡಿಸುವ ಅಧಿಕಾರವನ್ನು ಬ್ಯಾಂಕಿನ ನೇಮಕಾತಿ ಸಮಿತಿಯು ಹೊಂದಿರುತ್ತದೆ. ಇಂತಹ ಸಂದರ್ಭದಲ್ಲಿ ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ ಅಥವಾ ಇನ್ನಾವುದೇ ನೇಮಕಾತಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ

ಹೆಚ್. ಅಭ್ಯರ್ಥಿಯು ಯಾವುದೇ ರಾಜಕೀಯ ಪ್ರಭಾವ ಅಥವಾ ಒತ್ತಡವನ್ನು ನೇಮಕಾತಿ ಸಮಿತಿಗೆ ತಂದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಐ. ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಬ್ಯಾಂಕಿನ ಹಾಲಿ ಅಥವಾ ಮುಂದೆ ಪ್ರಾರಂಭಿಸುವ ಯಾವುದೇ ಶಾಖೆ / ಕಛೇರಿಯಲ್ಲಿ ಕೆಲಸ ಮಾಡಲು ಸಿದ್ಧರಿರಬೇಕು.

ಜೆ. ಅಭ್ಯರ್ಥಿಗಳು ತಪ್ಪು ಮಾಹಿತಿಯನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಹಾಗೂ ಅಪೂರ್ಣ ಮಾಹಿತಿ ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳನ್ನು ಎರಡು ವರ್ಷಗಳ ಅವಧಿಗೆ ಪ್ರೊಬೇಷನರಿ ಆಧಾರದಲ್ಲಿ ನೇಮಿಸಿಕೊಳ್ಳಲಾಗುವುದು. ಈ ಅವಧಿಯಲ್ಲಿ ತೃಪ್ತಿಕರವಾಗಿ ಸೇವೆಯನ್ನು ಮುಗಿಸಿದ ನಂತರ ಬ್ಯಾಂಕಿನ ನಿಯಮಾವಳಿಗೆ ಒಳಪಟ್ಟು ಹುದ್ದೆಯಲ್ಲಿ ಮುಂದುವರಿಸಲಾಗುವುದು.

ಕೆ. ಅಭ್ಯರ್ಥಿಗಳು ಭಾರತೀಯ ನಾಗರೀಕರಾಗಿರಬೇಕು.

ಎಲ್. ಒಬ್ಬ ಅಭ್ಯರ್ಥಿಯು ಒಂದು ಹುದ್ದೆಗೆ ಮಾತ್ರ ಅರ್ಜಿ ಸಲ್ಲಿಸಬೇಕು.

**ನೇಮಕಾತಿ ಸಮಿತಿ ಆದೇಶದ ಮೇರೆಗೆ**

**ಸಹಿ/-**

**ಸಮಿತಿ ಕಾರ್ಯದರ್ಶಿ**

ಸ್ಥಳ : ಬೆಂಗಳೂರು

ದಿನಾಂಕ : 27-01-2026